## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮಕ್ಕೆ ಹುದ್ದೆಗಳನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:**
1. 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-148
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 145 ಬಿಸಿಎ 2021, ದಿನಾಂಕ:07.02.2022.
3. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 199 ಬಿಸಿಎ 2021, ದಿನಾಂಕ:11.03.2022.

* * * * * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ.(1)ರಲ್ಲಿ ಕರ್ನಾಟಕ ಒಕ್ಕಲಿಗ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಒಂದು ಹೊಸ ನಿಗಮವನ್ನು ಸ್ಥಾಪಿಸಲು ಹಾಗೂ ನಿಗಮದ ಚಟುವಟಿಕೆಗಳಿಗೆ ರೂ.500.00 ಕೋಟಿಗಳನ್ನು ವೆಚ್ಚ ಮಾಡಲು ಪ್ರಸ್ತಾಪಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರ ಆದೇಶದಲ್ಲಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತ (Karanataka Vokkaliga Community Development Corporation Limited) ವನ್ನು ಸ್ಥಾಪಿಸಿ ಕಂಪನಿ ಕಾಯಿದೆ 2013ರಡಿಯಲ್ಲಿ ನೊಂದಾಯಿಸಲು ಆದೇಶಿಸಿದೆ.

ಮೇಲೆ ಓದಲಾದ ಕ್ರ.ಸಂ.(3)ರ ಆದೇಶದಲ್ಲಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತಕ್ಕೆ Memorandum of Association and Articles of Associationಗಳನ್ನು ಅನುಮೋದಿಸಿ ಆದೇಶಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತವು ಸಮುದಾಯದ ಹಿತಕ್ಕಾಗಿ ಕಾರ್ಯಾರಂಭಗೊಳ್ಳಲು ಹಾಗೂ ಚಟುವಟಿಕೆಗಳನ್ನು ಕೈಗೊಳ್ಳಲು ನಿಗಮಕ್ಕೆ ವ್ಯವಸ್ಥಾಪಕ ನಿರ್ದೇಶಕರನ್ನು ಒಳಗೊಂಡಂತೆ ಅಗತ್ಯ ಹುದ್ದೆಗಳನ್ನು ಸೃಜಿಸಬೇಕಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 187 ಬಿಸಿಎ 2021, ಬೆಂಗಳೂರು, ದಿನಾಂಕ:20.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತದ ಕೆಲಸಗಳು ಹಾಗೂ ಸರ್ಕಾರದ ಧ್ಯೇಯೋದ್ದೇಶಗಳನ್ನೊಳಗೊಂಡ ನಿಗಮ ಯೋಜನೆಗಳನ್ನು ಅನುಷ್ಠಾನಗೊಳಿಸಲು ಹಾಗೂ ನಿಗಮದ ದೈನಂದಿನ ಕೆಲಸಗಳನ್ನು ನಿರ್ವಹಿಸಲು ಅನುಕೂಲವಾಗುವಂತೆ ಕರ್ನಾಟಕ ಒಕ್ಕಲಿಗ

ಸಮುದಾಯ ಅಭಿವೃದ್ಧಿ ನಿಗಮ ನಿಯಮಿತದ ಕೇಂದ್ರ ಕಛೇರಿಗೆ ಈ ಕೆಳಕಂಡಂತೆ ಹುದ್ದೆಗಳನ್ನು ಸೃಜಿಸಲಾಗಿದೆ.

| ಕ್ರ ಸಂ | ಹುದ್ದೆಯ ಹೆಸರು | ವರ್ಗ | ವೇತನ ಶ್ರೇಣಿ | ಸಂಖ್ಯೆ | ಷರಾ |
|---|---|---|---|---|---|
| 01 | ವ್ಯವಸ್ಥಾಪಕ ನಿರ್ದೇಶಕರು | ಗ್ರೂಪ್-ಎ | ಸ್ವಂತ ವೇತನ | 1 | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ |
| 02 | ಕಂಪನಿ ಕಾರ್ಯದರ್ಶಿ (Retainership) | ಗ್ರೂಪ್-ಎ | 67550-104600 | 1 | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ |
| 03 | ಕಛೇರಿ ಅಧೀಕ್ಷಕರು | ಗ್ರೂಪ್-ಸಿ | 37900-70850 | 1 | |
| 04 | ಲೆಕ್ಕ ಸಹಾಯಕರು | ಗ್ರೂಪ್-ಸಿ | 27650-52650 | 1 | |
| 05 | ಪ್ರಥಮ ದರ್ಜೆ ಸಹಾಯಕರು | ಗ್ರೂಪ್-ಸಿ | 27650-52650 | 1 | |
| 06 | ದ್ವಿತೀಯ ದರ್ಜೆ ಸಹಾಯಕರು | ಗ್ರೂಪ್-ಸಿ | 21400-42000 | 2 | |
| 07 | ಡಾಟಾ ಎಂಟ್ರಿ ಆಪರೇಟರ್ | ಗ್ರೂಪ್-ಸಿ | 21,400-42,000 | 3 | ಹೊರಗುತ್ತಿಗೆ |
| 08 | ವಾಹನ ಚಾಲಕರು | ಗ್ರೂಪ್-ಸಿ | 21,400-42,000 | 2 | |
| 09 | ಜವಾನರು | ಗ್ರೂಪ್-ಡಿ | 17,000-28950 | 2 | |
| **ಒಟ್ಟು** | | | | **14** | |

**ಷರತ್ತುಗಳು:**

1. ಕರ್ನಾಟಕ ಒಕ್ಕಲಿಗ ಅಭಿವೃದ್ಧಿ ನಿಗಮವು ಇತ್ತೀಚಿಗೆ ಸ್ಥಾಪನೆಯಾಗಿರುವುದರಿಂದ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ನಿಗಮದ ಆಡಳಿತ ಮಂಡಳಿಯಲ್ಲಿಟ್ಟು ಸರ್ಕಾರದ ಅನುಮತಿಗಾಗಿ ಸಲ್ಲಿಸುವುದು.

2. ಕ್ರಮ ಸಂಖ್ಯೆ 7 ರಿಂದ 9 ರವರೆಗಿನ ಹುದ್ದೆಗಳನ್ನು ಹೊರ ಸಂಪನ್ಮೂಲ ಮೂಲಕ ತೆಗೆದುಕೊಳ್ಳುತ್ತಿರುವುದರಿಂದ ಸದರಿ ಹುದ್ದೆಗಳಿಗೆ ಕಾರ್ಮಿಕ ಇಲಾಖೆಯು ನಿಗದಿಪಡಿಸಿರುವ ಕನಿಷ್ಟ ವೇತನದಂತೆ ಸಂಭಾವನೆ ನಿಗದಿಗೊಳಿಸುವುದು.

...3

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 299 ವೆಚ್ಚ-3-2021, ದಿನಾಂಕ:13.04.2022ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
V. Akkamahadevi 20/4/22
(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಡಿ. ದೇವರಾಜ ಅರಸು ಭವನ, ವಸಂತನಗರ, ಬೆಂಗಳೂರು.

**ಮಾಹಿತಿಗಾಗಿ:**

1. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

******